**APRIL 04, 2024**

# ALL INDIA RADIO- DHARWAD

# PRADESH SAMACHARA (KANNADA) 7:05 AM

<><><>

**ಆಕಾಶವಾಣಿ–ಪ್ರದೇಶ ಸಮಾಚಾರ**

<><><>

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು**

<><><>

- ಕಲ್ಯಾಣ ಕರ್ನಾಟಕ ಹಾಗೂ ಕಿತ್ತೂರು ಕರ್ನಾಟಕ ಭಾಗದಲ್ಲಿ, ಬಿಸಿಗಾಳಿ; ಹವಾಮಾನ ಇಲಾಖೆ, ಮುನ್ನೆಚ್ಚರಿಕೆ.
- ಆವಾಸ ಸ್ಥಾನ ಸಂರಕ್ಷಣೆ ಧ್ಯೇಯದೊಂದಿಗೆ, ಜಲಚರಗಳ ವಿಶ್ವ ದಿನಾಚರಣೆ, ಸಂಪನ್ನ.
- 18ನೇ ಲೋಕಸಭೆ ಸಾರ್ವತ್ರಿಕ ಚುನಾವಣೆ; ರಾಜ್ಯದ 14 ಕ್ಷೇತ್ರಗಳಿಗೆ ನಾಮಪತ್ರ ಸಲ್ಲಿಸಲು ಇಂದು ಕೊನೆ ದಿನ.
- ಪ್ರತಿಯೊಂದು ಮತವೂ ಅಮೂಲ್ಯ; ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ, ಪಿ. ಎಸ್.ವಸ್ತ್ರದ.

<><><>

**ಈಗ ವಾರ್ತೆಗಳ ವಿವರ**

<><><>

ಭಾರತೀಯ ಹವಾಮಾನ ಇಲಾಖೆ, ರಾಜ್ಯದಲ್ಲಿ ಬಿಸಿಗಾಳಿಯ ಮುನ್ನೆಚ್ಚರಿಕೆ ನೀಡಿದೆ. ನಾಡಿದ್ದು, ಏಪ್ರಿಲ್ 6ರ ವರೆಗೆ ಕಲ್ಯಾಣ ಕರ್ನಾಟಕದ ರಾಜ್ಯದ ಕಲಬುರ್ಗಿ, ವಿಜಯಪುರ, ಬಾಗಲಕೋಟೆ, ರಾಯಚೂರು, ಕೊಪ್ಪಳ ಜಿಲ್ಲೆಗಳಲ್ಲಿ ಉಷ್ಣತೆ ಏರಿಕೆಯಾಗಲಿದೆ. ಕಿತ್ತೂರು ಕರ್ನಾಟಕದ ಬೆಳಗಾವಿ, ಧಾರವಾಡ, ಗದಗ್ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಉಷ್ಣಾಂಶವು ವಾಡಿಕೆಗಿಂತ 2 ರಿಂದ 4 ಡಿಗ್ರಿ ಸೆಲ್ಸಿಯಸ್ ಏರಿಕೆಯಾಗುವ ಸಂಭವವಿದೆ.

ಕಲಬುರಗಿಯಲ್ಲಿ ನಿನ್ನೆ ಗರಿಷ್ಠ ತಾಪಮಾನ 42.3 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಉಷ್ಣಾಘಾತದ ಸಂದರ್ಭದಲ್ಲಿ ಸಾರ್ವಜನಿಕರು ವಹಿಸಬೇಕಿರುವ ಮುನ್ನೆಚ್ಚರಿಕೆ ಬಗ್ಗೆ, ಧಾರವಾಡ ತಾಲೂಕು, ಹೆಬ್ಬಳ್ಳಿ ಗ್ರಾಮದ ಡಾಕ್ಟರ್ ಗುರುಪ್ರಸಾದ ದೇಶಪಾಂಡೆ, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

**ಡಾ. ಗುರುಪ್ರಸಾದ ದೇಶಪಾಂಡೆ ಧ್ವನಿ 50 ಸೆಕೆಂದುಗಳು**

<><><>

ವಿಶ್ವ ಜಲಚರ ದಿನವನ್ನು ನಿನ್ನೆ ಆಚರಿಸಲಾಯಿತು. ಜಲಚರಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿ, ಅವುಗಳ ಆವಾಸ ಸ್ಥಾನ ಮತ್ತು ಪಾರಿಸಾರಿಕ ವ್ಯವಸ್ಥೆಯ ಸುಸ್ಥಿರತೆ ಖಾತ್ರಿಪಡಿಸುವುದು ಈ ದಿನಾಚರಣೆಯ ಉದ್ದೇಶ.

<><><>

ರಣಬಿಸಿಲಿನ ತಾಪ ಕಡಲ ಮೀನುಗಾರಿಕೆಗೂ ತಟ್ಟಿದ ಪರಿಣಾಮ, ಸಮುದ್ರ ಮೀನುಗಳ ಬೆಲೆ ದಾಖಲೆ ಮಟ್ಟದಲ್ಲಿ ಹೆಚ್ಚಳ ಕಂಡಿದೆ. ಇದು ಮೀನುಗಾರರು ಮತ್ತು ವ್ಯಾಪಾರಿಗಳಿಗೆ ಸಂತಸ ತಂದಿದ್ದರೆ, ಮೀನು ಆಹಾರ ಪ್ರಿಯರಿಗೆ ಬಿಸಿ ತಟ್ಟಿಸಿದೆ.

<><><>

ಪ್ರದೇಶ ಸಮಾಚಾರಕ್ಕಾಗಿ, ಜಲಚರಗಳು ಎದುರಿಸುತ್ತಿರುವ ಪ್ರಸ್ತುತ ತವಕ ತಲ್ಲಣಗಳ ಕುರಿತು ಮಾಹಿತಿ ನೀಡಿದ್ದಾರೆ, ಉತ್ತರ ಕನ್ನಡ ಜಿಲ್ಲೆ ಕುಮಟಾದ ಹಿರಿಯ ಕಡಲ ಜೀವಶಾಸ್ತ್ರಜ್ಞ ಪ್ರೊಫೆಸರ್ ವಿ.ಎನ್.ನಾಯಕ್.

<><><>

ಪ್ರೊಫೆಸರ್ ವಿ.ಎನ್.ನಾಯಕ್ ಧ್ವನಿ 50 ಸೆಕೆಂದುಗಳು

<><><>

18ನೇ ಲೋಕಸಭೆ ಸಾರ್ವತ್ರಿಕ ಚುನಾವಣೆಗೆ, ದೇಶಾದ್ಯಂತ ಎರಡನೇ ಹಂತದ 89 ಕ್ಷೇತ್ರಗಳಿಗೆ ನಾಮಪತ್ರ ಸಲ್ಲಿಸಲು ಇಂದು ಕೊನೆಯ ದಿನವಾಗಿದೆ. ರಾಜ್ಯದಲ್ಲಿ ನಡೆಯುತ್ತಿರುವ ಮೊದಲ ಹಂತದ ಚುನಾವಣೆಗೂ ಉಮೇದುವಾರಿಕೆ ಪ್ರಕ್ರಿಯೆ ಬಿರುಸುಗೊಂಡಿದೆ. ರಾಜ್ಯದ 14 ಕ್ಷೇತ್ರಗಳಿಗೆ ಮಾರ್ಚ್ 28 ರಿಂದ ಆರಂಭವಾಗಿರುವ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಇಂದು ಕೊನೆಗೊಳ್ಳಲಿದೆ. ನಾಳೆ ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಉಮೇದುವಾರಿಕೆ ಹಿಂಪಡೆಯಲು ಏಪ್ರಿಲ್ 8, ಸೋಮವಾರ ಕೊನೆಯ ದಿನ.

<><><>

ಬಿಜೆಪಿ, ಕಾಂಗ್ರೆಸ್ ಸೇರಿದಂತೆ ವಿವಿಧ ಪಕ್ಷಗಳ ಅಭ್ಯರ್ಥಿಗಳು, ಬೃಹತ್ ಜಾಥಾ ನಡೆಸುವ ಮೂಲಕ, ಬೆಂಬಲಿಗರ ಬಲ ಪ್ರದರ್ಶನಕ್ಕೆ ಮುಂದಾಗಿವೆ. ತಮ್ಮ ಉಮೇದುವಾರಿಕೆಯನ್ನು ಜಾಥಾದಲ್ಲಿ ಆಗಮಿಸಿ, ಚುನಾವಣಾಧಿಕಾರಿಗಳಿಗೆ ಸಲ್ಲಿಸುತ್ತಿದ್ದಾರೆ.

<><><>

ಕಾಂಗ್ರೆಸ್ ಮತ್ತು ಮಿತ್ರಪಕ್ಷಗಳ ಸರ್ಕಾರ, ಮುಂಬರುವ ಚುನಾವಣೆಯಲ್ಲಿ ಬಹುಮತ ಪಡೆದರೆ, ಬಡ ವರ್ಗದವರ ಅಭಿವೃದ್ಧಿಯ ಗ್ಯಾರಂಟಿ ನೀಡಲಾಗುವುದು ಎಂದು, ಎ.ಐ.ಸಿ.ಸಿ. ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೊಸ ದಿಲ್ಲಿಯಲ್ಲಿ ಹೇಳಿದ್ದಾರೆ.

<><><>

ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ, ದೇಶಾದಂತ್ಯ 1 ಕೋಟಿ 80 ಲಕ್ಷ ಮತದಾರರು ಇದೇ ಪ್ರಥಮ ಬಾರಿಗೆ ಮತದಾನ ಮಾಡಲಿದ್ದಾರೆ. 19 ಕೋಟಿ 47 ಲಕ್ಷ ಮತದಾರರು, 20 ರಿಂದ 29 ವರ್ಷ ವಯೋಮಾನದವರಾಗಿದ್ದಾರೆ ಎಂದು, ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ. ಕರ್ನಾಟಕದಲ್ಲಿ 10 ಲಕ್ಷ 34 ಸಾವಿರದ 18 ಮತದಾರರು, 18 ಅಥವಾ 19 ವರ್ಷದ ವಯೋಮಾನದವರಾಗಿದ್ದಾರೆ ಎಂದು ಆಯೋಗ ಮಾಹಿತಿ ನೀಡಿದೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಪ್ರತಿಯೊಂದು ಮತವೂ ಅಮೂಲ್ಯವಾದುದು ಎಂದು, ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ. ಎಸ್.ವಸ್ತ್ರದ ಹೇಳಿದ್ದಾರೆ. ದಕ್ಷಿಣಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಸುಳ್ಕೇರಿ ಗ್ರಾಮದಲ್ಲಿ, ಮತದಾರರೊಂದಿಗೆ ಅವರು ಸಂವಾದ ನಡೆಸಿದರು.

<><><>

ಧಾರವಾಡದ, ಮ್ಯಾಟ್ರಿಕ್ ನಂತರದ ವಸತಿ ಶಾಲೆಗಳ ವಿದ್ಯಾರ್ಥಿಗಳು, ತಮ್ಮ ಪಾಲಕರಿಗೆ ಮತದಾನದ ಹಕ್ಕನ್ನು ಚಲಾಯಿಸಿ, ಸುದೃಢ ಭಾರತದ ನಿರ್ಮಾಣಕ್ಕೆ ಕೈ ಜೋಡಿಸುವಂತೆ, ಪತ್ರ ಬರೆದು ಮನವಿ ಮಾಡಿದ್ದಾರೆ.

<><><>

ಲೋಕಸಭಾ ಸಾರ್ವತ್ರಿಕ ಚುನಾವಣೆಯ ಕಾರ್ಯ ಮತ್ತು ಪ್ರಚಾರ ಕಾರ್ಯಕ್ರಮಗಳಲ್ಲಿ, 18 ವ ರ್ದೊಳಗಿನ ಮಕ್ಕಳನ್ನು ಬಳಸಿಕೊಳ್ಳುವುದು, ಕಾನೂನು ಬಾಹಿರ ಎಂದು, ಬಾಲಕಾರ್ಮಿಕರ ಯೋಜನಾ ಸಂಸ್ಥೆಯ ಅಧ್ಯಕ್ಷ ಅಕ್ರಂ ಪಾ ʼ ಕೋಲಾರದಲ್ಲಿ ತಿಳಿಸಿದ್ದಾರೆ.

<><><>

ಲೋಕಸಭಾ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿ, ಗರಿ ್ಠ 95 ಲಕ್ಷ ರೂಪಾಯಿ ಮಿತಿಯೊಳಗೆ ಖರ್ಚು ಮಾಡುವ ಅವಕಾಶವನ್ನು ಚುನಾವಣಾ ಆಯೋಗ ನಿಗದಿಪಡಿಸಿದೆ ಎಂದು ಹಾವೇರಿ ಜಿಲ್ಲಾ ಪಂಚಾಯಿತಿ ಮುಖ್ಯ ಲೆಕ್ಕಾಧಿಕಾರಿ ವಸಂತಕುಮಾರ್ ತಿಳಿಸಿದ್ದಾರೆ.

<><><>

ಮಾದರಿ ನೀತಿ ಸಂಹಿತೆ ಎಲ್ಲ ಪಕ್ಷಗಳು ಹಾಗೂ ಅಭ್ಯರ್ಥಿಗಳಿಗೆ ಸಮಾನ ಅವಕಾಶಗಳನ್ನು ನೀಡುವ ಉದ್ದೇಶ ಹೊಂದಿದೆ ಎಂದು ಕಲಬುರಗಿ ಜಿಲ್ಲಾ ಪಂಚಾಯ್ತಿ ಸಿ.ಇ.ಓ. ಭವರಲಾಲ್ ಮೀನಾ, ಆಕಾಶವಾಣಿ ಕಲಬುರಗಿ ಕೇಂದ್ರ ಆಯೋಜಿಸಿದ್ದ, ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ತಿಳಿಸಿದ್ದಾರೆ.

<><><>

ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ, ಮತ ಚಲಾಯಿಸಲು ಮತದಾರ ಪಟ್ಟಿಯಲ್ಲಿ ತಮ್ಮ ಹೆಸರು ನೋಂದಾಯಿಸಲು, ಇನ್ನೂ ಅವಕಾಶವಿದೆ ಎಂದು, ಶಿವಮೊಗ್ಗಾ ಜಿಲ್ಲಾ ಪಂಚಾಯಿತಿ ಸಿ.ಇ.ಓ. ಸ್ನೇಹಲ್ ಲೋಖಂಡೆ, ಆಕಾಶವಾಣಿಗೆ ತಿಳಿಸಿದ್ದಾರೆ.

<><><>

ಸಿ.ಇ.ಓ. ಸ್ನೇಹಲ್ ಲೋಖಂಡೆ ಧ್ವನಿ 35 ಸೆಕೆಂದುಗಳು

<><><>

ವಿಜಯಪುರ ಜಿಲ್ಲೆ ಇಂಡಿ ತಾಲೂಕಿನ ಲಚ್ಯಾಣ ಗ್ರಾಮದ ತೋಟದ ಮನೆ ಬಳಿ ಕೊಳವೆಬಾವಿಗೆ 14 ತಿಂಗಳ ಮಗು ಸಾತ್ವಿಕ್ ಸತೀಶ ಮುಜಗೊಂಡ ಬಿದ್ದಿದ್ದು, ಕಳೆದ 14 ಗಂಟೆಗಳಿಂದ ರಕ್ಷಣಾ ಕಾರ್ಯಾಚರಣೆ ಮುಂದುವರೆದಿದೆ. 4 ಎಕರೆ ನಿಂಬೆ ತೋಟದಲ್ಲಿ ಎರಡು ದಿನಗಳ ಹಿಂದೆ, ಮಗುವಿನ ಪಾಲಕರು 280 ಅಡಿ ವರೆಗೆ ಕೊರೆಯಿಸಿದ್ದ ಈ ಕೊಳವೆ ಬಾವಿಯಲ್ಲಿ, ನೀರು ಬಾರದ ಕಾರಣ ಮುಚ್ಚದೇ ಬಿಡಲಾಗಿತ್ತು. ಅಂದಾಜು 16 ಅಡಿ ಆಳದಲ್ಲಿ ಮಗು ಸಿಲುಕಿದೆ. ಜಿಲ್ಲಾಧಿಕಾರಿ ಭೂಬಾಲನ್ ಕಾರ್ಯಾಚರಣೆಯ ಮೇಲುಸ್ತುವಾರಿ ವಹಿಸಿದ್ದಾರೆ.

<><><>

ಕೊಪ್ಪಳ ತಾಲೂಕಿನ ಸಂಗಾಪುರ ಗ್ರಾಮದಲ್ಲಿ, ಬಿಸಿಯೂಟ ಸೇವಿಸಿ ಅಸ್ವಸ್ಥಗೊಂಡಿದ್ದ ಮಕ್ಕಳ ಮನೆಗಳಿಗೆ, ಜಿಲ್ಲಾ ಪಂಚಾಯತ್ ಸಿ.ಇ.ಓ. ರಾಹುಲ್ ರತ್ನಂ ಪಾಂಡೆ ಭೇಟಿ ನೀಡಿ, ಆರೋಗ್ಯ ವಿಚಾರಿಸಿದರು. ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೂ ಭೇಟಿ ನೀಡಿದ ಅವರು, ಮಕ್ಕಳ ಚೇತರಿಕೆ ಬಗ್ಗೆ, ವೈದ್ಯರಿಂದ ಮಾಹಿತಿ ಪಡೆದರು. ಬಳಿಕ, ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದ ಅವರು,  ಅಡುಗೆ ಕೋಣೆಯಲ್ಲಿ ಶುಚಿತ್ವ ಕಾಪಾಡಿಕೊಳ್ಳುವಂತೆ, ಶಾಲೆಯ ಮುಖ್ಯ ಶಿಕ್ಷಕರಿಗೆ ಸೂಚಿಸಿದರು.

<><><>

ಸಾಂಘಿಕ ಆಟ ಪ್ರದರ್ಶಿಸಿದ ಪಾಲಚಂಡ ತಂಡವು, ಕೊಡಗಿನ ನಾಪೋಕ್ಲು ಗ್ರಾಮದ ಚೆರಿಯಾಪರಂಬು ಜನರಲ್ ಕೆ.ಎಸ್.ತಿಮ್ಮಯ್ಯ ಕ್ರೀಡಾಂಗಣದಲ್ಲಿ ನಡೆಯುತ್ತಿರುವ, ಕೊಡವ ಕುಟುಂಬಗಳ ಕುಂಡ್ಯೋಳಂಡ ಕಪ್ ಹಾಕಿ ಟೂರ್ನಿಯ ಪಂದ್ಯದಲ್ಲಿ, 6-0 ಗೋಲುಗಳಿಂದ ಬಿಜ್ಜಂಡ ತಂಡವನ್ನು ಮಣಿಸಿತು.

<><><>

ಉಡುಪಿ ಜಿಲ್ಲೆ ಹೆಬ್ರಿ ತಾಲೂಕಿನ, ನಾಡಪಾಲು ಗ್ರಾಮದ ಭಾಸ್ಕರಶೆಟ್ಟಿ ಅವರ ತೋಟದ ಮನೆಯಲ್ಲಿ 15 ಅಡಿ ಉದ್ದ, 12.5 ಕಿಲೋ ತೂಕದ ಅಪರೂಪದ ಕಾಳಿಂಗ ಸರ್ಪವನ್ನು ಆಗುಂಬೆಯ ಉರಗರಕ್ಷಕ ಪಿ. ಗೌರಿಶಂಕರ ರಕ್ಷಿಸಿ, ಕಾಡಿಗೆ ಬಿಟ್ಟಿದ್ದಾರೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಕೆನಡಾದ ಟೊರಾಂಟೊದಲ್ಲಿ ಕ್ಯಾಂಡಿಡೇಟ್ಸ್ ಚೆಸ್ ಟೂರ್ನಿ ಆರಂಭವಾಗಿದ್ದು, ಭಾರತದ ಆರ್.ಪ್ರಜ್ಞಾನಂದ ಪ್ರಶಸ್ತಿ ಗೆಲ್ಲುವ ತವಕದಲ್ಲಿದ್ದಾರೆ.

<><><>

ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಇದೇ 18 ಮತ್ತು 19 ರಂದು ನಡೆಯಲಿರುವ, ಸಾಮಾನ್ಯ ಪ್ರವೇಶ ಪರೀಕ್ಷೆಯ (ಸಿ.ಇ.ಟಿ.) ಪ್ರವೇಶ ಪತ್ರವನ್ನು ಬಿಡುಗಡೆ ಮಾಡಿದೆ.

<><><>

ಶ್ರೀಲಂಕಾದ ಉನ್ನತ ಶಿಕ್ಷಣ ಮಂತ್ರಾಲಯಕ್ಕೆ ಸಲಹೆಗಾರರು ಹಾಗೂ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಸಮುದಾಯ ವಿಜ್ಞಾನ ಮಹಾವಿದ್ಯಾಲಯದ ನಿರ್ದೇಶಕರಾಗಿದ್ದ, ದಿವಂಗತ ಡಾಕ್ಟರ್ ಲೀಲಾ ಫಡ್ನಿಸ್ ಸ್ಮರಣಾರ್ಥ ಉಪನ್ಯಾಸ ಕಾರ್ಯಕ್ರಮ ಜರುಗಿತು.

<><><>

ಬಾಗಲಕೋಟೆ ನವನಗರದ ಸರಕಾರಿ, ಮೆಟ್ರಿಕ್ ನಂತರದ ಪರಿಶಿ ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ, ಬಾಲಕಿಯರ ವಸತಿ ನಿಲಯಗಳಲ್ಲಿ, ರಂಗೋಲಿ ಬಿಡಿಸಿ, ಮತದಾನ ಜಾಗೃತಿ ಮೂಡಿಸಿದರು.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:**

<><><>

- ಕಲ್ಯಾಣ ಕರ್ನಾಟಕ ಹಾಗೂ ಕಿತ್ತೂರು ಕರ್ನಾಟಕ ಭಾಗದಲ್ಲಿ, ಬಿಸಿಗಾಳಿ; ಹವಾಮಾನ ಇಲಾಖೆ, ಮುನ್ನೆಚ್ಚರಿಕೆ.
- ಆವಾಸ ಸ್ಥಾನ ಸಂರಕ್ಷಣೆ ಧ್ಯೇಯದೊಂದಿಗೆ, ಜಲಚರಗಳ ವಿಶ್ವ ದಿನಾಚರಣೆ, ಸಂಪನ್ನ.
- 18ನೇ ಲೋಕಸಭೆ ಸಾರ್ವತ್ರಿಕ ಚುನಾವಣೆ; ರಾಜ್ಯದ 14 ಕ್ಷೇತ್ರಗಳಿಗೆ ನಾಮಪತ್ರ ಸಲ್ಲಿಸಲು ಇಂದು ಕೊನೆ ದಿನ.
- ಪ್ರತಿಯೊಂದು ಮತವೂ ಅಮೂಲ್ಯ; ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ, ಪಿ. ಎಸ್.ವಸ್ತ್ರದ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.

<><><>